ಆ) ಹಾಗಿದ್ದಲ್ಲಿ ಎಲ್ಲೆಲ್ಲಿ ಪ್ರಾರಂಭಿಸಿವ ಇಚ್ಛೆ ಹಾಗೂ ಯಾವ ವರ್ಷದಿಂದ ಪ್ರಾರಂಭಿಸಲಾಗುವುದು ?

ಶ್ರೀ ವೈ. ಕೆ. ರಾಮಯ್ಯ (ತೋಟಗಾರಿಕೆ ರಾಜ್ಯ ಸಚಿವರು).—

ಅ) ಇದೆ.

ಆ) ಸೂಕ್ತವಾದ ಭೂಮಿಯನ್ನು ಪಡೆಯಲು ಪ್ರಯತ್ನಿಸಲಾಗುತ್ತಿದೆ. ಅದು ದೊರಕಿದ ನಂತರ ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಕೃಷಿ ಇಲಾಖೆಯಲ್ಲಿ ಹುದ್ದೆಗಳ ಭರ್ತಿ ಬಗ್ಗೆ

೩೨೭. ಶ್ರೀ ಗೋಪಾಲ ಮುಕುಂದಕಾನಡೆ (ಸಿರ್ಸಿ).— ಮಾನ್ಯ ಕೃಷಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕೃಷಿ ಇಲಾಖೆಯಲ್ಲಿರುವ ವಿವಿಧ ಹುದ್ದೆಗಳ ಸಂಖ್ಯೆ ಎಷ್ಟು ?

ಆ) ಆ ಪೈಕಿ ಖಾಲಿ ಇರುವ ವಿವಿಧ ಹುದ್ದೆಗಳೆಷ್ಟು ?

ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಈ) ಭಡ್ತಿ ನೀಡದೆ ಖಾಲಿ ಉಳಿದಿರುವ ಹುದ್ದೆಗಳ ಸಂಖ್ಯೆ ಎಷ್ಟು ?

ಉ) ಭಡ್ತಿ ನೀಡುವ ಸಂದರ್ಭದಲ್ಲಿ ಹರಿಜನ ಗಿರಿಜನರಿಗೆ ಆದ್ಯತೆ ನೀಡಿ ಭಡ್ತಿ ನೀಡಿದ ಹುದ್ದೆಗಳ ಸಂಖ್ಯೆ ಎಷ್ಟು ?

ಶ್ರೀ ಆರ್. ವಿ. ದೇಶಪಾಂಡೆ (ಕೃಷಿ ಸಚಿವರು).—

ಅ) ೧೫,೮೨೭.

ಆ) ೧,೦೫೨.

ಇ) ಹೌದು.

ಈ) ೧೬೪.

ಉ) ೩೫೨ (ಹರಿಜನರಿಗೆ ೩೧೦, ಗಿರಿಜನರಿಗೆ ೪೨.)

ಹೆಗ್ಗಡದೇವನಕೋಟೆ ಪ್ರಥಮ ದರ್ಜೆ ಕಾಲೇಜು ಕಟ್ಟಡ ಕಟ್ಟುವ ಬಗ್ಗೆ

೬೧. ಶ್ರೀ ಎಂ. ಶಿವಣ್ಣನವರು (ಹೆಚ್. ಡಿ. ಕೋಟೆ).— ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಹೆಚ್. ಡಿ. ಕೋಟೆಯಲ್ಲಿ ಪ್ರಥಮ ದರ್ಜೆ ಕಾಲೇಜಿಗೆ ಕಟ್ಟಡ ಇಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ ?

ಆ) ಹಾಗಿದ್ದಲ್ಲಿ, ಕಟ್ಟಡ ಕಟ್ಟಲು ಭೂಮಿ ವಶಪಡಿಸಿಕೊಳ್ಳಲಾಗಿದೆಯೇ ?

ಇ) ವಶಪಡಿಸಿಕೊಂಡಿದ್ದಲ್ಲಿ, ಯಾವ ಸ್ಥಳದಲ್ಲಿ ಹಾಗೂ ಎಷ್ಟು ಭೂಮಿ ವಶಪಡಿಸಿಕೊಳ್ಳಲಾಗಿದೆ?

ಈ) ಕಟ್ಟಡವನ್ನು ಯಾವಾಗ ನಿರ್ಮಿಸಿ ಪೂರ್ಣಗೊಳಿಸಲಾಗುವುದು ?

ಶ್ರೀ ಜೀವರಾಜ ಆಳ್ವ (ಉನ್ನತ ಶಿಕ್ಷಣ ಸಚಿವರು).—

ಅ) ಬಂದಿದೆ.

ಆ) ವಶಪಡಿಸಿಕೊಳ್ಳಲು ಕ್ರಮ ತೆಗೆದುಕೊಂಡಿದೆ.

ಇ) ಹೆಗ್ಗಡದೇವನಕೋಟೆ ಹುಣಸೂರು ಮಾರ್ಗದ ರಸ್ತೆಯಲ್ಲಿ ಸರ್ವೆ ನಂ. ೧೮೮ ಮತ್ತು ಮತ್ತು ೧೬೬.೪ರಲ್ಲಿ ೧೦ ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಕ್ರಮ ತೆಗೆದುಕೊಂಡಿದೆ. ಈ ವಿಷಯದಲ್ಲಿ ಕಂದಾಯ ಇಲಾಖೆಯೊಂದಿಗೆ ವ್ಯವಹರಿಸಲಾಗುತ್ತಿದೆ.

ಈ) ಕಂದಾಯ ಇಲಾಖೆ ಭೂ ಸ್ವಾಧೀನ ಕೊಟ್ಟ ನಂತರ ಸದರಿ ಕಾಲೇಜಿನ ಕಟ್ಟಡ ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಕರ್ನಾಟಕ ಆಗ್ರೋ ಇಂಡಸ್ಟ್ರೀಯಲ್ ಕಾರ್ಪೊರೇಷನ್ ಅಗ್ರಿಕಲ್ಚರ್ ಇಂಜಿನಿಯರಿಂಗ್ ಮಂಡ್ಯ ಇವರ ಅಧಿಕಾರ ದುರುಪಯೋಗದ ಬಗ್ಗೆ

೩೫೬. ಶ್ರೀ ಎಂ. ಶಿವಣ್ಣ (ಹೆಗ್ಗಡದೇವನಕೋಟೆ).— ಮಾನ್ಯ ಕೃಷಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮಂಡ್ಯದಲ್ಲಿರುವ ಕರ್ನಾಟಕ ಕೃಷಿ ಕೈಗಾರಿಕಾ ನಿಗಮದ ಇಲಾಖೆಯಲ್ಲಿನ ಕೃಷಿ ಇಂಜಿನಿಯರ್‌ರವರು ಅಧಿಕಾರ ದುರುಪಯೋಗ ಮಾಡಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ, ಅಧಿಕಾರಿಯ ವಿರುದ್ಧ ಕ್ರಮ ಕೈಗೊಳ್ಳಲು ಮೈಸೂರು ವಿಭಾಗದ ಕೃಷಿ ವಿಭಾಗೀಯ ಇಂಜಿನಿಯರ್‌ರವರು ಸರ್ಕಾರಕ್ಕೆ ಪತ್ರ ಬರೆದಿರುವುದು ನಿಜವೇ ?

ಇ) ರೇಷ್ಮೆ ಬೆಳಗಾರರು ಹಾಗೂ ಹರಿಜನ ರೈತರು ಸಾಮೂಹಿಕ ನೀರಾವರಿ ಸಹಕಾರ ಸಂಘ ನಿಯಮಿತ ಶೆಟ್ಟಿಹಳ್ಳಿ, ಮಂಳವಳ್ಳಿ ತಾಲ್ಲೂಕು ಇವರುಗಳು ಈ ಅಧಿಕಾರಿಯ ವಿರುದ್ಧ ಕ್ರಮ ಕೈಗೊಳ್ಳಲು ಮುಖ್ಯಮಂತ್ರಿಯವರಿಗೆ ಮನವಿ ಸಲ್ಲಿಸಿರುವುದು ನಿಜವೇ ?

ಈ) ಹಾಗಿದ್ದಲ್ಲಿ, ಆ ಅಧಿಕಾರಿಯ ವಿರುದ್ಧ ಇದುವರೆವಿಗೂ ಕ್ರಮ ಕೈಗೊಳ್ಳದಿರಲು ಕಾರಣವೇನು ?

ಶ್ರೀ ಆರ್. ವಿ. ದೇಶಪಾಂಡೆ (ಕೃಷಿ ಸಚಿವರು).—

ಅ) ಹೌದು.

ಆ) ಸರ್ಕಾರಕ್ಕೆ ಪತ್ರ ಬರೆದಿಲ್ಲ.

ಇ) ರೇಷ್ಮೆ ಬೆಳಿಗಾರರು ಮತ್ತು ಹರಿಜನ ರೈತರು ಸಾಮೂಹಿಕ ನೀರಾವರಿ ಸಹಕಾರ ಸಂಘ, ಶೆಟ್ಟಿಹಳ್ಳಿ. ಮಂಳವಳ್ಳಿ ತಾಲ್ಲೂಕು ಇವರಿಂದ ಯಾವುದೇ ಮನವಿಯು ಬಂದಿರುವುದಿಲ್ಲ. ಆದರೆ ಕರ್ನಾಟಕ ಕೃಷಿ ಕೈಗಾರಿಕಾ ನಿಗಮ ಮತ್ತು ಅದರ ಅಧೀನ ನಿಗಮಂಗಳ ಹರಿಜನ ಮತ್ತು ಗಿರಿಜನ ನೌಕರರ ಕ್ಷೇಮಾಭಿವೃದ್ಧಿ ಸಂಘ ಇವರು ಮಾನ್ಯ ಮುಖ್ಯಮಂತ್ರಿಗಳಿಗೆ ಈ ವಿಷಯದಲ್ಲಿ ಒಂದು ಮನವಿಯನ್ನು ಸಲ್ಲಿಸಿರುತ್ತಾರೆ.

ಈ) ಸದರಿ ನೌಕರರ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳುವ ಬಗ್ಗೆ ಕರ್ನಾಟಕ ಕೃಷಿ ಕೈಗಾರಿಕಾ ನಿಗಮವು ಇವರ ಮೇಲೆ ಇರುವ ಆಪಾದನೆಗಳ ಬಗ್ಗೆ ಪರಿಶೀಲಿಸುತ್ತಿದೆ.

ಮೈಸೂರು ಕೃಷ್ಣರಾಜಸಾಗರ ರಸ್ತೆಯನ್ನು ಜೋಡಿ ರಸ್ತೆ ಮಾಡುವ ಬಗ್ಗೆ

೧೯೮. ಶ್ರೀ ಪಿ. ಎಂ. ಚಿಕ್ಕಬೋರಯ್ಯ (ಚಾಮರಾಜ).— ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮೈಸೂರು ನಗರದಿಂದ ಕೃಷ್ಣರಾಜಸಾಗರವನ್ನು ಸೇರುವ ರಸ್ತೆಯ ಇಬ್ಬದಿಯಲ್ಲಿ ಅನೇಕ ಕೈಗಾರಿಕೆಗಳು ಪ್ರಾರಂಭವಾದಾಗಿನಿಂದ ರಸ್ತೆಯಲ್ಲಿ ಸಂಚಾರ ಒತ್ತಡ ಹೆಚ್ಚಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ?